25. 2012ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಕನ್ನಡ ಮತ್ತು ಸಂಸ್ಕೃತಿ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 280.70 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

26. 2012ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1109.67 ಲಕ್ಷಗಳು ಮತ್ತು ಬಂಡವಾಳ ಲೆಕ್ಕದಲ್ಲಿ 400.00 ಲಕ್ಷಗಳಲ್ಲಿ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

27. 2012ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಕಾನೂನು" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 1219.84 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

28. 2012ನೇ ಮಾರ್ಚ್ 31ರ ಅಂತ್ಯದೊಳಗಾಗಿ "ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ" ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 2235.18 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡುವುದು.

5. ಶಾಸನ ರಚನೆ :

(ಆ) ವಿಧೇಯಕಗಳನ್ನು ಮಂಡಿಸುವುದು

1. ಕರ್ನಾಟಕ ಧನ ವಿನಿಯೋಗ (ಸಂಖ್ಯೆ 6) ವಿಧೇಯಕ, 2011

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 6). ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ :

"2011ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 6) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು."

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು,
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು,
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.
ಪ್ರಸ್ತಾವವು ಅಂಗೀಕೃತವಾಗಿದೆ.

ಅಧ್ಯಕ್ಷರು : ಮಾನ್ಯ ಮುಖ್ಯಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ 2011ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 6) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–2)

2. ಕರ್ನಾಟಕ ಧನ ವಿನಿಯೋಗ (ಸಂಖ್ಯೆ 5) ವಿಧೇಯಕ, 2011

ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2011ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 5) ವಿಧೇಯಕವನ್ನು ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

"2011ನೇ ಸಾಲಿನ ಕರ್ನಾಟಕ ಧನ ವಿನಿಯೋಗ (ಸಂಖ್ಯೆ 5) ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು,
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು,
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.
ಪ್ರಸ್ತಾವವು ಅಂಗೀಕೃತವಾಗಿದೆ.

ಅಧ್ಯಕ್ಷರು : ಮಾನ್ಯ ಮುಖ್ಯ ಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು.